ವಜಾ ಮಾಡಲಾಗಿದ್ದು ಅಂತಹ ರೈತರು ನಮೂನೆ-53ರಲ್ಲಿ ಅರ್ಜಿ ಸಲ್ಲಿಸದಿದ್ದಲ್ಲಿ ಅಂತಹ ಅರ್ಜಿದಾರರಿಗೆ ಜಮೀನು ಮಂಜೂರು ಮಾಡುವಲ್ಲಿ ಸರ್ಕಾರ ಕೈಗೊಳ್ಳುವ ಕ್ರಮವೇನು?

ಆ) ನಮೂನೆ-53ರಲ್ಲಿ ಅರ್ಜಿ ಸಲ್ಲಿಸಿದವರಿಗೆ ಪುನಃ ಅರ್ಜಿ ಸಲ್ಲಿಸಲು ಕಾಲಾವಕಾಶ ಕೊಡುವ ಬಗ್ಗೆ ಸರ್ಕಾರದ ನಿಲುವೇನು?

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು) :

ಅ) ನಿಗಧಿತ ಅವಧಿಯಲ್ಲಿ ನಮೂನೆ-53ರಲ್ಲಿ ಅರ್ಜಿ ಸಲ್ಲಿಸದಿದ್ದಲ್ಲಿ ಜಮೀನು ಸಕ್ರಮೀಕರಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಆ) ಪುನಃ ಅರ್ಜಿ ಸಲ್ಲಿಸಲು ಕಾಲಾವಕಾಶ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ರೋಣ ತಾಲ್ಲೂಕಿನಲ್ಲಿ ಹೊಸದಾಗಿ ಆರಂಭಿಸಿರುವ ಅಂಗನವಾಡಿ ಕೇಂದ್ರಗಳು

2994 - ಶ್ರೀ ಗುರುಪಾದಗೌಡ ಸಂಗನಗೌಡ ಪಾಟೀಲ್ (ರೋಣ) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಒಟ್ಟು ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು?

ಆ) ಹೊಸದಾಗಿ ಈ ಸಾಲಿಗೆ ಆರಂಭಿಸಲು ಉದ್ದೇಶಿಸಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು?

ಇ) ರೋಣ ತಾಲ್ಲೂಕಿಗೆ ಹೊಸದಾಗಿ ಆರಂಭಿಸಲು ಉದ್ದೇಶಿಸಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು?

ಶ್ರೀಮತಿ ಮೋಟಮ್ಮ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಸಚಿವರು) :

ಅ) ರಾಜ್ಯದಲ್ಲಿ ಒಟ್ಟು ಮಂಜೂರಾಗಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ 40170

ಆ) ಇಲ್ಲ

ಇ) 42

ರೋಣ ತಾಲ್ಲೂಕು ಗಜೇಂದ್ರಗಡದಲ್ಲಿ ಮಿನಿ ಬಸ್ ಡಿಪೋ ಪ್ರಾರಂಭಿಸುವುದು

2995 - ಶ್ರೀ ಗುರುಪಾದಗೌಡ ಸಂಗನಗೌಡ ಪಾಟೀಲ್ (ರೋಣ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಮಿನಿ ಬಸ್ ಡಿಪೋ ಆರಂಭಿಸಲು ಸರ್ಕಾರ ನಿರ್ಧರಿಸಿದೆ?

ಆ) ರೋಣ ತಾಲ್ಲೂಕು ಗಜೇಂದ್ರಗಡದಲ್ಲಿ ಮಿನಿ ಬಸ್ ಡಿಪೋ ಆರಂಭಿಸಲು ಈಗಾಗಲೇ ಪ್ರಸ್ತಾವನೆ ಸಲ್ಲಿಸಲಾಗಿದ್ದು ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳಾವುವು?